# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 118 (35) |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎ.ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) |
| 3) | ಉತ್ತರಿಸಬೇಕಾದ ದಿನಾಂಕ | 19-12-2022 |
| 4) | ಉತ್ತರಿಸುವವರು | ಮಾನ್ಯ ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು. |

| ಪ್ರಶ್ನೆ | ಉತ್ತರ |
|---|---|
| (ಅ) ಪ್ರಧಾನ ಮಂತ್ರಿಯವರ ಕೌಶಲ್ಯ ವಿಕಾಸ್ ಯೋಜನೆ-3.0 ಕೇಂದ್ರ ಬಿಂದು ಕಾರ್ಯಕ್ರಮದ ಕೋವಿಡ್-19 ಸೋಂಕು ಹರಡುವಿಕೆ ತಡೆಗಟ್ಟಲು ಮಂಜೂಣಿಯಲ್ಲಿದ್ದ ಕಾರ್ಯಪಡೆಗೆ ತ್ವರಿತ ಕಾರ್ಯಕ್ರಮವನ್ನು ರೂಪಿಸಿರುವುದು ನಿಜವೇ; (ಪೂರ್ಣವಿವರ ನೀಡುವುದು) | ಹೌದು<br><br>ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ವತಿಯಿಂದ ಪ್ರಧಾನ ಮಂತ್ರಿ ಕೌಶಲ್ಯ ವಿಕಾಸ್ ಯೋಜನೆ-3.0 ಅಡಿಯಲ್ಲಿ ಕೋವಿಡ್-19 ನಂತಹ ಸಾಂಕ್ರಾಮಿಕ ರೋಗ ಹರಡುವಿಕೆ ತಡೆಗಟ್ಟಲು 2021-22 ನೇ ಸಾಲಿನಲ್ಲಿ 15,000 ಅಭ್ಯರ್ಥಿಗಳಿಗೆ ಆರೋಗ್ಯ ವಲಯದಲ್ಲಿ ಉಚಿತ ಕೌಶಲ್ಯಾಧಾರಿತ ತರಬೇತಿಯನ್ನು ನೀಡಲು ಗುರಿಯನ್ನು ನಿಗದಿಪಡಿಸಲಾಗಿದ್ದು, ಅದರಲ್ಲಿ 11489 ಅಭ್ಯರ್ಥಿಗಳಿಗೆ ಉಚಿತ ಕೌಶಲ್ಯಾಧಾರಿತ ತರಬೇತಿಯನ್ನು ನೀಡಲಾಗಿದೆ. |
| (ಆ) ಈ ಯೋಜನೆ ಅಡಿ ಯಾವ ವೃಂದದ ಅಧಿಕಾರಿಗಳಿಗೆ/ಸಿಬ್ಬಂದಿಗಳಿಗೆ/ಯುವಕರಿಗೆ ತರಬೇತಿ ನೀಡಲಾಗಿದೆ ಮತ್ತು ಇದರಿಂದ ಆಗಿರುವ ಉಪಯುಕ್ತತೆ ಎಷ್ಟು; (ಪೂರ್ಣ ವಿವರ ನೀಡುವುದು) | ಈ ಯೋಜನೆಯಡಿ ಯಾವುದೇ ವೃಂದದ ಸರ್ಕಾರಿ ಅಧಿಕಾರಿ/ಸಿಬ್ಬಂದಿಗಳಿಗೆ ತರಬೇತಿಯನ್ನು ನೀಡಿರುವುದಿಲ್ಲ. ಆದರೆ ಈ ಯೋಜನೆಯಡಿ ಕೆಳಕಂಡ 6 ಆರೋಗ್ಯ ವಲಯದ ಜಾಬ್‌ರೋಲ್‌ಗಳಿಗೆ ಸಂಬಂಧಿಸಿದಂತೆ ಉಚಿತ ಕೌಶಲ್ಯಾಧಾರಿತ ತರಬೇತಿಯನ್ನು ರಾಜ್ಯದ ಯುವಕ ಯುವತಿಯರಿಗೆ ನೀಡಲಾಗಿದ್ದು, ಈ ಮೂಲಕ ಆರೋಗ್ಯವಲಯದಲ್ಲಿನ ಸಿಬ್ಬಂದಿಗಳ ಕೊರತೆಯನ್ನು ನಿವಾರಿಸಲು ಹಾಗು ಕೋವಿಡ್-19 ನಂತಹ ಸೋಂಕು ಹರಡುವಿಕೆಯನ್ನು ತಡೆಗಟ್ಟಲು ಸಹಕಾರ ನೀಡಲಾಗಿದೆ. |

| ಕ್ರಮ ಸಂಖ್ಯೆ | ಜಾಬ್‌ರೋಲ್‌ಗಳ ವಿವರ |
|---|---|
| 1 | Basic Care Support |
| 2 | Home Care Support |
| 3 | Emergency Care Support |
| 4 | Advanced Care Support |
| 5 | Sample Collection Support |
| 6 | Medical Equipment Support |

| | |
|---|---|
| (ಇ) ಈ ಯೋಜನೆ ಅಡಿಯಲ್ಲಿ ತ್ವರಿತ ರೀತಿಯಲ್ಲಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕೇಂದ್ರ ಸರ್ಕಾರ ನೀಡಿರುವ ಆರ್ಥಿಕ ನೆರವನ್ನು ಯಾವ ರೀತಿ ಉಪಯೋಗಿಸಿಕೊಳ್ಳಲಾಗಿದೆ? (ಪೂರ್ಣ ವಿವರ ನೀಡುವುದು) | ಈ ಯೋಜನೆಯಡಿ ಕೇಂದ್ರ ಸರ್ಕಾರ ನೀಡಿರುವ ಅರ್ಥಿಕ ನೆರವನ್ನು ಬಳಸಿಕೊಂಡು ತರಬೇತಿ ಸಂಸ್ಥೆಗಳಿಗೆ ತರಬೇತಿ ವೆಚ್ಚವನ್ನು ಮಾತ್ರ ಪಾವತಿಸಲಾಗಿದೆ. |

**ಸಂಖ್ಯೆ: ಕೌಉಜೀಇ 25 ಕೌಗುಪ್ರ 2022**

(ಡಾ|| ಸಿ.ಎನ್. ಅಶ್ವಥ್‌ನಾರಾಯಣ)
ಉನ್ನತ ಶಿಕ್ಷಣ, ವಿದ್ಯುನ್ಮಾನ, ಐಟಿ-ಬಿಟಿ ಮತ್ತು
ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ
ಮತ್ತು ಜೀವನೋಪಾಯ ಇಲಾಖಾ ಸಚಿವರು.